ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಹಿರಿಯ ನಾಗರಿಕರಿಗೆ ದೊರಯುತ್ತಿರುವ ಸೌಲಭ್ಯಗಳ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

734 (665) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಿರಿಯ ನಾಗರಿಕರಿಗೆ ರಾಜ್ಯ ಸರ್ಕಾರದಿಂದ ದೊರೆಯುತ್ತಿರುವ ಸೌಲಭ್ಯಗಳು ಯಾವುವು; ಹಿರಿಯ ನಾಗರಿಕರು ಆರ್ಥಿಕವಾಗಿ ಸಬಲರಾಗಿರುವಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ಅನೇಕ ಹಿರಿಯ ನಾಗರಿಕರು ವಯೋಸಹಜ ಅನಾರೋಗ್ಯದಿಂದ ನರಳುತ್ತಿರುವುದರಿಂದ ಅವರ ಆರೋಗ್ಯ ರಕ್ಷಣೆಗೆ ಸರ್ಕಾರ ಯಾವ ಯೋಜನೆಗಳನ್ನು ಹಾಕಿಕೊಂಡಿದೆ ;

(ಇ) ತಮ್ಮ ಮಕ್ಕಳಿಂದ ಪರಿತ್ಯಕ್ತ ಹಿರಿಯ ನಾಗರಿಕರು ಆಸ್ಪತ್ರೆಗೆ ತೆರಳಲೂ ಅಸಮರ್ಥರಿರುವ ಸಂದರ್ಭದಲ್ಲಿ ಅವರ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ರಾಜ್ಯದಲ್ಲಿರುವ ವೃದ್ಧಾಶ್ರಮಗಳ ಸಂಖ್ಯೆ ಎಷ್ಟು; ಅಲ್ಲಿ ಪ್ರಸ್ತುತ ಎಷ್ಟು ವೃದ್ಧರಿಗೆ ಆಶ್ರಯ ನೀಡಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)